# ಸಹಾಯಕ ಆಯುಕ್ತರ ನ್ಯಾಯಾಲಯ, ಬಳ್ಳಾರಿ

ಸಂ: ಕಂದಾಯ/ಅಪೀಲು/96/14-15

ದಿನಾಂಕ :05-08-2016

ಉಪಸ್ಥಿತರು: **ಶ್ರೀ ಲೋಕೇಶ್ ಪಿ.ಎನ್** (ಕ.ಆ.ಸೇ)

**ಸಹಾಯಕ ಆಯುಕ್ತರು, ಬಳ್ಳಾರಿ.**

| ವಾದಿಗಳು | ಪ್ರತಿವಾದಿಗಳು |
|---|---|
| 1)ಶ್ರೀಮತಿ ಶಾರದ ಗಂಡ ಜಿ.ಮೋಹನ ರಾವ್ M I G 53 ಗಾಂಧಿನಗರ ವಾರ್ಡ ನಂ 17 ಮನೆ ನಂ 16 ಎಸ್ ಎನ್ ಪೇಟೆ ಬಳ್ಳಾರಿ<br><br>**ಶ್ರೀ ಕೆ.ರಮೇಶ ವಕೀಲರು ಬಳ್ಳಾರಿ** | 1)ಶ್ರೀ ತಹಶೀಲ್ದಾರರು ಬಳ್ಳಾರಿ<br>2)ಕಂದಾಯ ನಿರೀಕ್ಷಕರು ಬಳ್ಳಾರಿ<br>3)ಗ್ರಾಮಲೆಕ್ಕಾಧಿಕಾರಿಗಳು ಸಂಗನಕಲ್ಲು |

**ದಾವಾ ಜಮೀನಿನ ವಿವರ :-**

| ತಾಲ್ಲೂಕು | ಗ್ರಾಮ | ಸ. ನಂ. | ವಿಸ್ತೀರ್ಣ (ಎಕರೆಗಳಲ್ಲಿ) |
|---|---|---|---|
| ಬಳ್ಳಾರಿ | ಸಂಗನಕಲ್ಲು | 162/ಎ1/12 | 0.05 |

--@@@--

ವಾದಿಯು ಅವರ ವಕೀಲರ ಮುಖಾಂತರ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(2) ರಡಿಯಲ್ಲಿ ಕಂದಾಯ ನಿರೀಕ್ಷಕರು ಬಳ್ಳಾರಿ ಇವರ M R No 42/94-95 ದಿನಾಂಕ 12/12/94 ರ ಆದೇಶದ ವಿರುದ್ಧ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯನ್ನು ಸಲ್ಲಿಸುವಲ್ಲಿ ಆದ ವಿಳಂಬಕ್ಕೆ ಕಾಲಮಿತಿ ಕಾಯ್ದೆಯಡಿ ವಿಳಂಬ ಮನ್ನಾಕ್ಕೆ ಅರ್ಜಿ ಸಲ್ಲಿಸಿರುತ್ತಾರೆ. ವಿಳಂಬ ಮನ್ನಾ ಮಾಡಿ ಪ್ರಕರಣವನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ನೈಸರ್ಗಿಕ ನ್ಯಾಯ ದೃಷ್ಠಿಯಿಂದ ಉಭಯ ಪಕ್ಷಗಾರರಿಗೂ ನೋಟೀಸಗಳನ್ನು ಕಳುಹಿಸಿ ದಿನಾಂಕ: 10-04-2015, 09-10-2015, ಮತ್ತು 05-08-2016 ಪ್ರಕರಣದ ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಅವರ ವಕೀಲರು ಮುಖಾಂತರ ದಿನಾಂಕ: 05-08-2016 ರಂದು ಈ ನ್ಯಾಯಾಲಯಕ್ಕೆ ಅಪೀಲುದಾರರು ಗೈರುಹಾಜರಾಗಿದ್ದು, ಬಳ್ಳಾರಿ ತಾಲ್ಲೂಕಿನ ಸಂಗನಕಲ್ಲು ಗ್ರಾಮದ ಸ.ನಂ 162/ಎ1/12 ವಿಸ್ತೀರ್ಣ: 0.05 ಎಕರೆ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು ಬಳ್ಳಾರಿ ಇವರ M R No 42/94-95 ದಿನಾಂಕ 12-12-1994 ಆದೇಶದಲ್ಲಿ ಪಹಣಿಕಾಲಂ 12(2) ರಲ್ಲಿ ಜಿ.ಶಾರದ ಎಂದು ಅಕ್ರಮವಾಗಿ ಬರೆದು ನೋಂದಾಯಿಸಿರುತ್ತಾರೆಂದು ಹಕ್ಕುಬದಲಾವಣೆಯನ್ನು ತಿರಸ್ಕರಿಸಿರುವುದರ ವಿರುದ್ಧ ಈ ನ್ಯಾಯಾಲಕ್ಕೆ ಸಲ್ಲಿಸಿರುತ್ತಾರೆ. ಮುಂದುವರೆದು ಲಭ್ಯದಾಖಲೆಗಳನ್ನು ಪರಿಶೀಲಿಸಲಾಗಿ, ಪ್ರಶ್ನಿತ ಹಕ್ಕುದಾಖಲೆಯು ಪಹಣಿ ಸ.ನಂ 162/ಎ1/12 ಪರಿಶೀಲಿಸಲಾಗಿ, ಕರ್ನಾಟಕ ಭೂಕಂದಾಯ ಕಾಯ್ದೆಕಲಂ 95 ನ್ನು ಸ್ಪಷ್ಟವಾಗಿ ಉಲ್ಲಂಘನೆ ಮಾಡಿ, ಕೃಷಿಜಮೀನನ್ನು ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆಯದೇ ಅನ್ಯಾತಾ ಕಾರ್ಯಾಕ್ಕೆ ಖರೀದಿಸಿರುವುದು ಕಂಡುಬಂದಿರುತ್ತದೆ ಕಾರಣ ಈ ಕೆಳಕಂಡಂತೆ ಆದೇಶ

## :: ಆದೇಶ ::

**ಮೇಲ್ಮನವಿಯನ್ನು ತಿರಸ್ಕರಿಸಿದೆ.**

ಪೀಠಿಕೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಬಳ್ಳಾರಿ ತಾಲ್ಲೂಕಿನ ಸಂಗನಕಲ್ಲು ಗ್ರಾಮದ ಸ.ನಂ 162/ಎ1/12 ವಿಸ್ತೀರ್ಣ: 0.05 ಎಕರೆ ಜಮೀನಿಗೆ ಸಂಬಂಧಿಸಿದಂತೆ ಕರ್ನಾಟಕ ಭೂಕಂದಾಯ ಕಾಯ್ದೆಕಲಂ 95 ರ ಉಲ್ಲಂಘನೆ ಮಾಡಿರುವುದು ಮೇಲ್ನೋಟಕ್ಕೆ ಕಂಡುಬಂದಿವ ಕಾರಣ ಸದರಿ ಮೇಲ್ಮನವಿಯನ್ನು ತಿರಸ್ಕರಿಸಿ ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ,ಬರೆಯಿಸಿ, ತಪ್ಪುಗಳನ್ನು ತಿದ್ದಿ **ದಿನಾಂಕ:05-08-2016** ರಂದು ಬಹಿರಂಗ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಸಹಾಯಕ ಆಯುಕ್ತರು,

ಬಳ್ಳಾರಿ.

ಪ್ರತಿಯನ್ನು ವಾದಿಗೆ ಮತ್ತು ತಹಶೀಲ್ದಾರರು ಬಳ್ಳಾರಿ ಇವರಿಗೆ ಮಾಹಿತಿಗಾಗಿ